3) ಬನ್ನಾರಿಯಮ್ಮ ಸಕ್ಕರೆ ಕಾರ್ಖಾನೆ ಒಂದು ವರ್ಷಕ್ಕೆ ಎಷ್ಟು ಕಬ್ಬನ್ನು ಅರೆಯುತ್ತಿದೆ?

ಶ್ರೀ ಅಮರೇಗೌಡ ಎಲ್. ಪಾಟೀಲ್ ಬಯ್ಯಾಪುರ (ಸಕ್ಕರೆ ಸಚಿವರು) :

1) ಮೈಸೂರು–ಚಾಮರಾಜನಗರದಿಂದ ಹೊರ ರಾಜ್ಯಕ್ಕೆ ಕಬ್ಬು ಸಾಗಾಣಿಕೆಯಾಗಿರುವುದಿಲ್ಲ.

2) * ಮೈಸೂರು ಜಿಲ್ಲೆಯಲ್ಲಿ ಪ್ರತಿ ವರ್ಷ ಅಂದಾಜು 18.00 ಲಕ್ಷ ಟನ್ ಕಬ್ಬಿನ ಉತ್ಪಾದನೆಯಾಗುತ್ತದೆ.

* ಚಾಮರಾಜನಗರ ಜಿಲ್ಲೆಯಲ್ಲಿ ಪ್ರತಿ ವರ್ಷ ಅಂದಾಜು 7.00 ಲಕ್ಷ ಟನ್ ಕಬ್ಬಿನ ಉತ್ಪಾದನೆಯಾಗುತ್ತದೆ.

3) ಬನ್ನಾರಿಯಮ್ಮನ್ ಕಾರ್ಖಾನೆಯು ಪ್ರತಿ ದಿನ 5000 ಟನ್ ಕಬ್ಬು ಅರೆಯುವ ಸಾಮರ್ಥ್ಯ ಹೊಂದಿದ್ದು ಅದು ಒಂದು ಹಂಗಾಮಿಗೆ ಅಂದಾಜು 13 ಲಕ್ಷ ಟನ್ ಕಬ್ಬನ್ನು ಅರೆಯುತ್ತದೆ.

<u>ವಸತಿ ಗೃಹಗಳ ಕಟ್ಟಡ ನಿರ್ಮಾಣ</u> :

443 (5260) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂವ ಜಿಲ್ಲೆ ಸವದತ್ತಿ ತಾಲ್ಲೂಕಿನ ಹೂಲಿಕಟ್ಟೆ ಮತ್ತು ಯುಜುರ್ವಿ ಗ್ರಾಮಗಳಲ್ಲಿ ಇರುವ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದ ನಿವೇಶನವನ್ನು ಇಲಾಖೆಗೆ, ಹಸ್ತಾಂತರಿಸಿ ಕಟ್ಟಡ ನಿರ್ಮಾಣದ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ;

ಆ) ವಿದ್ಯಾರ್ಥಿ ನಿಲಯಗಳು ಹಾಲಿ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದ್ದು ವಿದ್ಯಾರ್ಥಿಗಳಿಗೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಕೈಗೊಂಡ ಕ್ರಮವೇನು?

ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಬೆಳಗಾಂ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಹೂಲಿಕಟ್ಟೆ ಮತ್ತು ಯುಜುರ್ವಿ ಗ್ರಾಮಗಳ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯಗಳಿಗೆ ನಿವೇಶನಗಳು ಲಭ್ಯವಿರುತ್ತದೆ. ಈ ಎರಡೂ ಸ್ಥಳಗಳಲ್ಲಿ ಕಟ್ಟಡ ನಿರ್ಮಾಣದ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಆ) ಹೌದು.

ಇ) ಆಯವ್ಯಯದ ಲಭ್ಯತೆ ಮೇರೆಗೆ ಹೊಸ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣವನ್ನು ಹಂತ ಹಂತವಾಗಿ ಕೈಗೆತ್ತಿಕೊಳ್ಳಲಾಗುತ್ತದೆ.

ತುಮಕೂರು ಭಾಗದ ಶೆಟ್ಟಿ ಹಳ್ಳಿ, ಉಪ್ಪಾರ ಹಳ್ಳಿ ರೈಲ್ವೇಗೇಟ್ ಮೇಲುಸೇತುವೆ ನಿರ್ಮಾಣ ಮಾಡುವುದು :

444 (5013) ಶ್ರೀ ಶಿವಣ್ಣ ಎಸ್. (ತುಮಕೂರು) :- ಮಾನ್ಯ ಕೈಗಾರಿಕೆ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ನಗರದ ಶೆಟ್ಟಿಹಳ್ಳಿ ಗೇಟ್ ಹಾಗೂ ಉಪ್ಪಾರಹಳ್ಳಿ ರೈಲ್ವೆ ಗೇಟ್‌ಗಳ ಮಧ್ಯೆ ಮೇಲು ಸೇತುವೆ ನಿರ್ಮಾಣಕ್ಕೆ ಸಂಬಂಧಪಟ್ಟಂತೆ ರಾಜ್ಯದ ಪಾಲಿನ ಹಣವನ್ನು ನೀಡಲು ಹಾಗೂ ಆದ್ಯತಾ ಮತ್ತು ಬದ್ಧತಾ ಪತ್ರವನ್ನು ರೈಲ್ವೆ ಇಲಾಖೆಗೆ ನೀಡುವ ಇರಾದೆ ಸರ್ಕಾರಕ್ಕಿದೆಯೇ; ಇದ್ದಲ್ಲಿ, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು);

ಆ) ಈ ಸೇತುವೆ ಹಾಗೂ ಸಂಪರ್ಕ ರಸ್ತೆಗೆ ಸಂಬಂಧಿಸಿದಂತೆ ಅಂದಾಜು ಮತ್ತು ನೀಲಿ ನಕ್ಷೆ ತಯಾರಾಗಿದೆಯೇ ಹಾಗೂ ಸಂಬಂಧಪಟ್ಟ ಪ್ರಾಧಿಕಾರ ಯಾವುದು;

ಇ) ಸೇತುವೆ ಹಾಗೂ ಸಂಪರ್ಕ ರಸ್ತೆಗಳ ಕಾಮಗಾರಿಗಳ ಉಸ್ತುವಾರಿ ಹಾಗೂ ನಿರ್ವಹಣೆ ಪ್ರಾಧಿಕಾರ ಯಾವುದು; (ವಿವರ ಒದಗಿಸುವುದು)?

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಕೈಗಾರಿಕೆ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು):

ಅ) ದಿನಾಂಕ 01-06-2005 ರಂದು ನಡೆದ ರಸ್ತೆ ಮೇಲು ಸೇತುವೆ ಮತ್ತು ರಸ್ತೆ ಕೆಳಸೇತುವೆ ನಿರ್ಮಾಣ ಚಾಲನಾ ಸಮಿತಿಯ ಸಭೆಯಲ್ಲಿ ತುಮಕೂರು ನಗರದ ಶೆಟ್ಟಿಹಳ್ಳಿ ಗೇಟ್ ಹಾಗೂ ಉಪ್ಪಾರಹಳ್ಳಿ ರೈಲ್ವೆ ಗೇಟ್‌ಗಳ ಮಧ್ಯೆ ಲೆವೆಲ್ ಕ್ರಾಸಿಂಗ್ ನಂ.40 ಮತ್ತು 41ರ ಬದಲಿಗೆ ರಸ್ತೆ ಮೇಲು ಸೇತುವೆ ನಿರ್ಮಾಣ ಮಾಡುವ ಪ್ರಸ್ತಾವನೆಯನ್ನು 2005-06ನೇ ಸಾಲಿನ ಆದ್ಯತಾ ಪಟ್ಟಿಯಲ್ಲಿ ಸೇರಿಸಿ ಕೈಗೆತ್ತಿಕೊಳ್ಳಲು ತೀರ್ಮಾನಿಸಿ ದಿನಾಂಕ 7-7-2005 ರಂದು ಸರ್ಕಾರ ಆದೇಶವನ್ನು ಹೊರಡಿಸಲಾಗಿದೆ. ಆದ್ಯತಾ ಪಟ್ಟಿಯಲ್ಲಿನ RoB/RuB ಗಳಿಗೆ 2005-06ನೇ ಸಾಲಿನ ಆಯವ್ಯಯದಲ್ಲಿ ರೂ.20 ಕೋಟಿಗಳನ್ನು ಒದಗಿಸಲಾಗಿದೆ. ಕಾಮಗಾರಿಯ ಪ್ರಗತಿಯನ್ನು ಆಧರಿಸಿ ರಾಜ್ಯದ ಪಾಲಿನ ಹಣ ಬಿಡುಗಡೆ ಮಾಡಲಾಗುವುದು.

ಆ) ಅಂದಾಜು ಪಟ್ಟಿ ಮತ್ತು ಜೆಎಡಿಗಳನ್ನು ತಯಾರಿಸಲು ಮೆ॥ ರೈಟ್ಸ್ ಅವರಿಗೆ ವಹಿಸಲಾಗುವುದು.